# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **384** |
| ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆ ಅನುಷ್ಠಾನ ಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆ ಅನುಷ್ಠಾನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ ಪ್ರಸ್ತಾವನೆ ಯಾವ ಹಂತದಲ್ಲಿದೆ; | ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ ವ್ಯಾಪ್ತಿಯ ಚಿಕ್ಕಮಗಳೂರು ತಾಲ್ಲೂಕು ಮಲೆನಾಡು ಹಾಗೂ ಬಯಲು ಪ್ರದೇಶವನ್ನು ಹೊಂದಿರುತ್ತದೆ.<br><br>ಮಲೆನಾಡು ಪ್ರದೇಶಗಳಲ್ಲಿ ಮನೆಗಳು ತೋಟಗಳ ಮಧ್ಯೆ ಇರುವುದರಿಂದ ನಿರಂತರ ಜ್ಯೋತಿ ಯೋಜನೆ ಅನುಷ್ಠಾನವು ಕಷ್ಟ ಸಾಧ್ಯವಾಗಿರುತ್ತದೆ. ಆದಾಗ್ಯೂ, ಪ್ರಸ್ತುತ 12 ಗಂಟೆಗಳ 3 ಫೇಸ್, ಉಳಿದಂತೆ ಸಿಂಗಲ್ ಫೇಸ್ ವಿದ್ಯುತ್‌ನ್ನು ಪೂರೈಸಲಾಗುತ್ತಿದೆ.<br><br>ಚಿಕ್ಕಮಗಳೂರು ತಾಲ್ಲೂಕಿನ ಮಲೆನಾಡು ಪ್ರದೇಶವನ್ನು ಹೊರತುಪಡಿಸಿ ಉಳಿದ ಬಯಲು ಪ್ರದೇಶಗಳಲ್ಲಿರುವ ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆ ಅನುಷ್ಠಾನಗೊಳಿಸಲು 16 ಮಿಶ್ರ ಹೊರೆ (Mixed Load) ಫೀಡರ್‌ಗಳಿಂದ ಕೃಷಿ ಹೊರೆಯನ್ನು (Agricultural Load) ಬೇರ್ಪಡಿಸಲು ಹೊಸದಾಗಿ 10 ಕೃಷಿಯೇತರ ಫೀಡರ್‌ಗಳನ್ನು (ಎನ್‌ಜೆವೈ) ರಚಿಸಲು ಸುಮಾರು ರೂ.54 ಕೋಟಿ ಮೊತ್ತದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ದಿನಾಂಕ 26.12.2024 ರಂದು ಮಂಜೂರಾತಿಗಾಗಿ ಸಲ್ಲಿಸಲಾಗಿರುತ್ತದೆ.<br><br>ಸದರಿ ಪ್ರಸ್ತಾವನೆಯು ಕೇಂದ್ರ ಸರ್ಕಾರದಿಂದ ಅನುಮೋದನೆಗೊಂಡ ನಂತರ ಶೀಘ್ರದಲ್ಲಿ ಕಾಮಗಾರಿಗಳನ್ನು ಮೆಸ್ಕಾಂ ವತಿಯಿಂದ ಕೈಗೊಳ್ಳಲಾಗುವುದು. |
| ಆ) | ಯಾವ ಕಾಲಮಿತಿಯಲ್ಲಿ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ನಿರಂತರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು? (ವಿವರ ಒದಗಿಸುವುದು) | |

ಸಂಖ್ಯೆ: ಎನರ್ಜಿ 43 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು